ಜಿಲ್ಲಾಧಿಕಾರಿಗಳ ಕಾರ್ಯಾಲಯ, ಉತ್ತರ ಕನ್ನಡ, ಕಾರವಾರ – 581 301
OFFICE OF THE DEPUTY COMMISSIONER, UTTARA KANNADA DISTRICT, KARWAR, -581 301
ದೂರವಾಣಿ : (08382) 226406/226471/222071, ಫ್ಯಾಕ್ಸ್: 226603/222072 Email: dckarwar@gmail.com

ಸಂ. ಡಿಸಿಬಿ/ಎಂಎಜಿ/ಇತರೆ/ವಿವ-401/2019-20

13-03-2020

ಜಿಲ್ಲಾ ದಂಡಾಧಿಕಾರಿ, ಉ.ಕ. District Magistrate, Uttara Kannada

ವಿಷಯ: ಉತ್ತರ ಕನ್ನಡ ಜಿಲ್ಲೆಯಲ್ಲಿ ಕೋವಿಡ್-19 ಎಂಬ ಅಪಾಯಕಾರಿ ಸಾಂಕ್ರಾಮಿಕ ರೋಗ ಹರಡದಂತೆ ಸೂಕ್ತ ಮುಂಜಾಗ್ರತ ಕ್ರಮ ಜರುಗಿಸುವ ಕುರಿತು.

ಉಲ್ಲೇಖ: 1. ಸಾಂಕ್ರಮಿಕ ರೋಗ ಕಾಯ್ದೆ 1897

2. ಕರ್ನಾಟಕ ಸರಕಾರದ ಅಧಿಸೂಚನೆ ಸಂಖ್ಯೆ ಹೆಚ್ ಎಫ್ ಡಬ್ಲ್ಯೂ / 54/ ಸಿಜಿಎಂ/2020 ದಿನಾಂಕ: 11-3-2020.

**ಪ್ರಸ್ತಾವನೆ:**

ಕೋವಿಡ್-19 ವೈರಾಣುಗಳಿಂದ ಹರಡುವ ಅಪಾಯಕಾರಿ ಸಾಂಕ್ರಾಮಿಕ ರೋಗವನ್ನು ತಡೆಗಟ್ಟುವ ನಿಟ್ಟಿನಲ್ಲಿ ಮತ್ತು ಸಾರ್ವಜನಿಕ ಹಿತಾದೃಷ್ಟಿಯನ್ನು ಕಾಯ್ದುಕೊಳ್ಳಲು ಮುಂಜಾಗೃತ ಕ್ರಮವಾಗಿ ಉತ್ತರ ಕನ್ನಡ ಜಿಲ್ಲೆಗೆ ಸೀಮಿತವಾದಂತೆ ಈ ಕೆಳಗಿನ ಆದೇಶ ಹೊರಡಿಸಿದೆ-

**ಆದೇಶ:**

ಈ ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳಿಂದ ಮತ್ತು ಸಾಂಕ್ರಾಮಿಕ ರೋಗ ಕಾಯ್ದೆ 1897 ರಡಿಯಲ್ಲಿ ಹೊರಡಿಸಿದ ಅಧಿಸೂಚನೆ ಕ್ರಮಾಂಕ: ಹೆಚ್ ಎಫ್ ಡಬ್ಲ್ಯೂ/ 54/ ಸಿಜಿಎಂ/2020 ದಿನಾಂಕ: 11-3-2020 ರನ್ವಯ ಪ್ರದತ್ತವಾದ ಅಧಿಕಾರದ ಮೇರೆಗೆ ಉತ್ತರ ಕನ್ನಡ ಜಿಲ್ಲೆಯ ವಿಪತ್ತು ನಿರ್ವಹಣಾ ಸಮಿತಿಯ ಅಧ್ಯಕ್ಷ ಹಾಗೂ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿಯಾದ ನಾನು ಡಾ. ಹರೀಶ್ ಕುಮಾರ್ ಕೆ, ಭಾ.ಆ.ಸೇ ಈ ಕೆಳಗಿನಂತೆ ಕ್ರಮಗಳನ್ನು ಕೈಗೊಳ್ಳಲು ಆದೇಶಿಸುತ್ತೇನೆ.

1. ಉತ್ತರ ಕನ್ನಡ ಜಿಲ್ಲೆಗೆ ಆಗಮಿಸುವ ಎಲ್ಲಾ ಅಂತರರಾಷ್ಟ್ರೀಯ ಪ್ರಯಾಣಿಕರನ್ನು (ಭಾರತೀಯರು ಹಾಗೂ ವಿದೇಶಿಯರು) ರೋಗ ಲಕ್ಷಣ ಇಲ್ಲದಿದ್ದರೂ ಸಹ 14 ದಿನಗಳ ಕಾಲ ತಮ್ಮ ಮನೆಯಲ್ಲಿ ಪ್ರತ್ಯೇಕವಾಗಿ ಇರಿಸತಕ್ಕದ್ದು.
2. ಸಿನಿಮಾ ಮಂದಿರಗಳು, ನಾಟಕಗಳು, ರಂಗಮಂದಿರಗಳು, ವಸ್ತು ಪ್ರದರ್ಶನಗಳು, ಕ್ಲಬಗಳು, ಕ್ರೀಡಾಂಗಣಗಳು, ಹಾಗೂ ಹೆಚ್ಚಾಗಿ ಜನರು ಸೇರುವಂತಹ ಮದುವೆ ಕಾರ್ಯಕ್ರಮಗಳು ನಡೆಸತಕ್ಕದ್ದಲ್ಲ.
3. ಧಾರ್ಮಿಕ ಕಾರ್ಯಕ್ರಮಗಳಿಗೆ ಮತ್ತು ಜಾತ್ರೆಗಳಿಗೆ ಆದಷ್ಟು ಕಡಿಮೆ ಸಂಖ್ಯೆಯಲ್ಲಿ ಜನರು ಭಾಗವಹಿಸುವಂತೆ ಧಾರ್ಮಿಕ ಸಂಸ್ಥೆಗಳ ಆಡಳಿತ ಸಮಿತಿಯು ಸೂಕ್ತ ಸಾರ್ವಜನಿಕ ತಿಳುವಳಿಕೆ ಹೊರಡಿಸತಕ್ಕದ್ದು.
4. ಈಜುಕೊಳ, ಜಿಮ್, ಬೇಸಿಗೆ ಶಿಬಿರ ಮುಂತಾದವುಗಳನ್ನು ಮುಚ್ಚತಕ್ಕದ್ದು.
5. ಶಾಲೆ, ಕಾಲೇಜು, ಮಹಾವಿದ್ಯಾಲಯ, ಕೋಚಿಂಗ್ ಸೆಂಟರ್ ಗಳನ್ನು ಮುಚ್ಚಲು ಕರ್ನಾಟಕ ಸರ್ಕಾರದ ಶಿಕ್ಷಣ ಇಲಾಖೆಯಿಂದ ಹೊರಡಿಸಿದ ಸುತ್ತೋಲೆ/ಆದೇಶ/ಅಧಿಸೂಚನೆಗಳಂತೆ ಕಡ್ಡಾಯವಾಗಿ ಕ್ರಮ ಕೈಕೊಳ್ಳತಕ್ಕದ್ದು.
6. ಖಾಸಗಿ ವೈದ್ಯರುಗಳು, ಖಾಸಗಿ ಆಸ್ಪತ್ರೆಗಳು ಹಾಗೂ ನರ್ಸಿಂಗ್ ಹೋಮಗಳಲ್ಲಿ ದಿನಾಂಕ:21-02-2020ರ ನಂತರ ವಿದೇಶದಿಂದ ಆಗಮಿಸಿದ ಕೋವಿಡ್-19 ರೋಗದ ಲಕ್ಷಣ ಹೊಂದಿರುವ ರೋಗಿಗಳು ದಾಖಲಾಗಿದ್ದಲ್ಲಿ ಅದರ ಮಾಹಿತಿಯನ್ನು ತಕ್ಷಣ ಜಿಲ್ಲಾ ಆರೋಗ್ಯಾಧಿಕಾರಿಗಳು, ಉತ್ತರ ಕನ್ನಡ, ಕಾರವಾರರವರ ಗಮನಕ್ಕೆತುರ್ತು ಸಂಪರ್ಕ ಮಾಧ್ಯಮದ ಮೂಲಕ ತರತಕ್ಕದ್ದು.
7. ಕೋವಿಡ್-19 ಸೊಂಕು ಪೀಡಿತರಿಗೆ ಸರ್ಕಾರ ನಿಗಧಿಪಡಿಸಿದ ಮಾರ್ಗಸೂಚಿಯಂತೆ (SOP) ವೈದ್ಯಕೀಯ ಉಪಚಾರ ಒದಗಿಸಲು ಅಗತ್ಯವಿರುವ ಎಲ್ಲಾ ವ್ಯವಸ್ಥೆಯನ್ನು ಜಿಲ್ಲೆಯಲ್ಲಿಯ ಯಾವತ್ತೂ ಆಸ್ಪತ್ರೆಗಳಲ್ಲಿ (ಸರ್ಕಾರಿ/ಖಾಸಗಿ) ಕೈಗೊಳ್ಳತಕ್ಕದ್ದು.

Scanned with CamScanner

8. ಈ ಮೇಲಿನ ಸೂಚನೆಗಳನ್ನು ಪ್ರಜ್ಞಾಪೂರ್ವಕವಾಗಿ ಉಲ್ಲಂಘಿಸುವವರು ಭಾರತೀಯ ದಂಡ ಸಂಹಿತೆ ಕಲಂ 188 ರನ್ವಯ ಶಿಕ್ಷೆಗೆ ಅರ್ಹರಾಗಿರುತ್ತಾರೆ.

ಈ ಆದೇಶವನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸಲು ಈ ಕೆಳಕಂಡ ಅಧಿಕಾರಿಗಳು ಜವಾಬ್ದಾರರಾಗಿರುತ್ತಾರೆ.

1. ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ, ಉತ್ತರ ಕನ್ನಡ, ಕಾರವಾರ,
2. ಮುಖ್ಯ ಕಾರ್ಯನಿರ್ವಾಣಾಧಿಕಾರಿ, ಜಿಲ್ಲಾ ಪಂಚಾಯತ, ಉತ್ತರ ಕನ್ನಡ, ಕಾರವಾರ.
3. ನಿರ್ದೇಶಕರು, ಕಾರವಾರ ವೈದ್ಯಕೀಯ ಮತ್ತು ವಿಜ್ಞಾನ ಸಂಸ್ಥೆ, ಕಾರವಾರ.
4. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು,
5. ಜಿಲ್ಲೆಯ ಯಾವತ್ತೂ ಸಹಾಯಕ ಕಮೀಷನರ್ ಮತ್ತು ತಹಶೀಲ್ದಾರರು
6. ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು

**ಈ ಆದೇಶವು ದಿನಾಂಕ:14-03-2020 ರಿಂದ ಒಂದು ವಾರದವರೆಗೆ ಊರ್ಜಿತವಿರುತ್ತದೆ. ಮತ್ತು ಸಂದರ್ಭಾನುಸಾರ ಊರ್ಜಿತಾವಧಿ ವಿಸ್ತರಿಸುವ ಶರ್ತುಗಳಿಗೆ ಒಳಪಟ್ಟಿರುತ್ತದೆ.**

ಜಿಲ್ಲಾ ದಂಡಾಧಿಕಾರಿ, ಉ.ಕ. District Magistrate, Uttara Kannada

(ಡಾ. ಹರೀಶ್ ಕುಮಾರ್ ಕೆ.,)
ಅಧ್ಯಕ್ಷರು, ಜಿಲ್ಲಾ ವಿಪತ್ತು ನಿರ್ವಹಣಾ ಸಮಿತಿ ಹಾಗೂ
ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಧಂಡಾಧಿಕಾರಿ,
ಉತ್ತರ ಕನ್ನಡ ಜಿಲ್ಲೆ ಕಾರವಾರ.

ಪ್ರತಿ ಸಂಬಂಧಿಸಿದ ಎಲ್ಲಾ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ,
ಪ್ರತಿ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಜನಸಂಪರ್ಕ ಅಧಿಕಾರಿ ಕಾರವಾರರವರಿಗೆ,

2/ ಸದರಿ ಆದೇಶವನ್ನು ಉತ್ತರ ಕನ್ನಡ ಜಿಲ್ಲೆಯಲ್ಲಿ ಪ್ರಕಟವಾಗುವ ಯಾವತ್ತು ದಿನಪತ್ರಿಕೆಗಳಲ್ಲಿ ಸರ್ಕಾರಕ್ಕೆ ಖರ್ಚು ಬಾರದ ರೀತಿಯಲ್ಲಿ ಸಾರ್ವಜನಿಕ ಪ್ರಕಟಣೆ ನೀಡಲು ಸೂಚಿಸಿದೆ.

ಅಧ್ಯಕ್ಷರು, ಜಿಲ್ಲಾ ವಿಪತ್ತು ನಿರ್ವಹಣಾ ಸಮಿತಿ ಹಾಗೂ
ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಧಂಡಾಧಿಕಾರಿ,
ಉತ್ತರ ಕನ್ನಡ ಜಿಲ್ಲೆ ಕಾರವಾರ.

Scanned with CamScanner